ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ
**Karnataka State Rural Development and Panchayat Raj University**

ರೈತ ಭವನ, ಜನರಲ್‌ಕಾರ್ಯಪ್ಪ ವೃತ್ತ, ಗದಗ– 582 101
**RaithaBhavana, General Cariappa Circle, Gadag – 582 101**
**E-mail: ksrdpruadmissions@gmail.com Phone: 08372-230338, Fax: 08372-297343**

# News about an Interactive Session on NEP-2020 held at KSRDPR University is published in various kannada Daily Newspaper

**"Navodaya"**



## ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು

ಗದಗ,ಫೆ.27. ರಾಷ್ಟ್ರೀಯ ಶಿಕ್ಷಣ ನೀತಿಯು ಕೌಶಲ್ಯ ಹಾಗೂ ವೃತ್ತಿ ಆಧಾರಿತವಾದ ಶಿಕ್ಷಣವನ್ನು ಪ್ರತಿನಿಧಿಸುತ್ತದೆ. ದೇಶದ ಶಿಕ್ಷಣಕ್ಕೆ ಸಂಬಂಧಿಸಿದಂತೆ ಬಹುವಿಧದಲ್ಲಿ ಇದರ ಪ್ರಾಯೋಜನೆಯು ಆಗಲಿದೆ. ಭಾರತೀಯತೆಯನ್ನು ಆಧಾರವಾಗಿಟ್ಟುಕೊಂಡು ಈ ಶಿಕ್ಷಣ ನೀತಿಯನ್ನು ಸಿದ್ಧಪಡಿಸಲಾಗಿದೆ. ಶಿಕ್ಷಕರ ನಿರಂತರ ಮೌಲ್ಯಮಾಪನದೊಂದಿಗೆ ವಿದ್ಯಾರ್ಥಿಗಳ ಬಹುವಿಧದ ಸಾಮರ್ಥ್ಯ ಹಾಗೂ ಕೌಶಲ್ಯವನ್ನು ವೃದ್ಧಿಸುವ ಕಾರ್ಯ ಶಿಕ್ಷಣ ನೀತಿಯಿಂದ ನೆರವೇರಲಿದೆ ಎಂದು ಆಂಧ್ರಪ್ರದೇಶದ ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿಗಳು ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಕರಡು ಸಮಿತಿ ಸದಸ್ಯ ಪ್ರೊ. ಟಿ.ವಿ.ಕಟ್ಟಿಮನಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ವಿಶ್ವವಿದ್ಯಾಲಯದಲ್ಲಿ ಭಾರತೀಯ ಶಿಕ್ಷಣ ಮಂಡಳ,ಕರ್ನಾಟಕ ಉತ್ತರ ವಿಭಾಗ ಹಾಗೂ ನೀತಿ ಆಯೋಗ ಆಶ್ರಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನದಲ್ಲಿ ಶಿಕ್ಷಕರ ಪಾತ್ರ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ಈ ಕುರಿತಂತೆ ಶಿಕ್ಷಕರು ಶಿಕ್ಷಣ ನೀತಿಯ ಪರಿಣಾಮಕಾರಿ ಅನುಷ್ಠಾನದಲ್ಲಿ ಶ್ರಮವನ್ನು ವಹಿಸಬೇಕೆಂದು ಹೇಳಿದರು.

ಈ ವಿಚಾರ ಗೋಷ್ಠಿಯ ಅಧ್ಯಕ್ಷತೆಯನ್ನು ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ವಿಷ್ಣುಕಾಂತ ಎಸ್. ಚಟಪಲ್ಲಿ ಮಾತನಾಡಿ, ಸಮಾಜ ನಿರ್ಮಾಣ ಹಾಗೂ ರಾಷ್ಟ್ರ ಕಟ್ಟುವಲ್ಲಿ ಶಿಕ್ಷಣ ಮಹತ್ತರವಾದಂತಹ ಪಾತ್ರ ವಹಿಸುತ್ತದೆ. ಇದನ್ನು ಭಾರತದ ಪರಾಂಪರಂಗತ ಶಿಕ್ಷಣ ಸಂಸ್ಕೃತಿಯಲ್ಲಿ ಕಾಣಬಹುದಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನದಲ್ಲಿ ಈಗಾಗಲೇ ಸರ್ಕಾರದಿಂದ ಅನೇಕ ಉಪಕ್ರಮಗಳು ಜರುಗಿವೆ. ಆದರೆ ಭಾರತದ ಪ್ರಸ್ತುತ ಶಿಕ್ಷಣ ರಂಗದಲ್ಲಿ ಅನೇಕ ರೀತಿಯ ಸಮಸ್ಯೆಗಳಿವೆ ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಈ ಶಿಕ್ಷಣ ನೀತಿಯ ದೃಷ್ಟಿಕೋನವನ್ನು ಅರ್ಥೈಸಿಕೊಳ್ಳಬೇಕಾಗುತ್ತದೆ ಹಾಗೂ ಈ ಕುರಿತು ಅರಿವನ್ನು ಹೊಂದುವುದು ಹೆಚ್ಚು ಮುಖ್ಯವಾಗಿದೆ ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿಯ ಸಂಯೋಜಕ ವಿನಾಯಕ ಜೋಶಿ ಮಾತನಾಡಿದರು. ಕುಲಸಚಿವ ಪ್ರೊ. ಬಸವರಾಜ ಲಕ್ಕಣ್ಣವರ ಸ್ವಾಗತಿಸಿದರು. ಪ್ರಕಾಶ ಎಸ್. ಮಾಚೇನಹಳ್ಳಿ ನಿರೂಪಿಸಿದರು. ಎಂ.ಎಸ್.ಡಬ್ಲ್ಯು ವಿಭಾಗದ ಉಪನ್ಯಾಸಕ ಸೋಮಲಿಂಗ ಕರಣಿ ವಂದಿಸಿದರು.

**"Prajavani"**



ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನದಲ್ಲಿ ಶಿಕ್ಷಕರ ಪಾತ್ರ– ವಿಚಾರ ಸಂಕಿರಣ

## ಕೌಶಲ, ವೃತ್ತಿ ಆಧರಿತ ಶಿಕ್ಷಣಕ್ಕೆ ಒತ್ತು

ಪ್ರಜಾವಾಣಿ ವಾರ್ತೆ

ಗದಗ: 'ರಾಷ್ಟ್ರೀಯ ಶಿಕ್ಷಣ ನೀತಿಯು ಕೌಶಲ ಹಾಗೂ ವೃತ್ತಿ ಆಧಾರಿತ ಶಿಕ್ಷಣವನ್ನು ಪ್ರತಿನಿಧಿಸುತ್ತದೆ. ದೇಶದ ಶಿಕ್ಷಣಕ್ಕೆ ಸಂಬಂಧಿಸಿದಂತೆ ಬಹುವಿಧದಲ್ಲಿ ಇದರ ಪ್ರಯೋಜನ ಆಗಲಿದೆ' ಎಂದು ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಕರಡು ಸಮಿತಿಯ ಸದಸ್ಯ ಪ್ರೊ. ಟಿ.ವಿ.ಕಟ್ಟಿಮನಿ ಹೇಳಿದರು.

ವಿಚಾರ ಸಂಕಿರಣದಲ್ಲಿ ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಟಿ.ವಿ.ಕಟ್ಟಿಮನಿ ಮಾತನಾಡಿದರು

ನಗರದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ ಭಾರತೀಯ ಶಿಕ್ಷಣ ಮಂಡಳ ಹಾಗೂ ನೀತಿ ಆಯೋಗದ ಸಹಯೋಗದಲ್ಲಿ ಶನಿವಾರ ನಡೆದ 'ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನದಲ್ಲಿ ಶಿಕ್ಷಕರ ಪಾತ್ರ' ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

'ಭಾರತೀಯತೆಯನ್ನು ಆಧಾರವಾಗಿಟ್ಟುಕೊಂಡು ಹೊಸ ಶಿಕ್ಷಣ ನೀತಿ ಸಿದ್ಧಪಡಿಸಲಾಗಿದೆ. ಶಿಕ್ಷಕರ ನಿರಂತರ ಮೌಲ್ಯಮಾಪನದೊಂದಿಗೆ ವಿದ್ಯಾರ್ಥಿಗಳ ಬಹುವಿಧದ ಸಾಮರ್ಥ್ಯ ಹಾಗೂ ಕೌಶಲ ವೃದ್ಧಿಸುವ ಕಾರ್ಯ ಶಿಕ್ಷಣ ನೀತಿಯಿಂದ ನಡೆಯಲಿದೆ. ಈ ಕುರಿತಂತೆ ಶಿಕ್ಷಕರು ಶಿಕ್ಷಣ ನೀತಿಯ ಪರಿಣಾಮಕಾರಿ ಅನುಷ್ಠಾನದಲ್ಲಿ ಶ್ರಮವಹಿಸಬೇಕು' ಎಂದು ಹೇಳಿದರು.

ವಿಚಾರಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ ಎಸ್. ಚಟಪಲ್ಲಿ, 'ಸಮಾಜ ನಿರ್ಮಾಣ ಹಾಗೂ ರಾಷ್ಟ್ರ ಕಟ್ಟುವಲ್ಲಿ ಶಿಕ್ಷಣ ಮಹತ್ತರವಾದ ಪಾತ್ರ ವಹಿಸುತ್ತದೆ. ಇದನ್ನು ಭಾರತದ ಪರಂಪರಾಗತ ಶಿಕ್ಷಣ ಸಂಸ್ಕೃತಿಯಲ್ಲಿ ಕಾಣಬಹುದಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನದಲ್ಲಿ ಈಗಾಗಲೇ ಸರ್ಕಾರದಿಂದ ಅನೇಕ ಉಪಕ್ರಮಗಳು ನಡೆದಿವೆ. ಆದರೆ, ಭಾರತದ ಪ್ರಸ್ತುತ ಶಿಕ್ಷಣ ರಂಗದಲ್ಲಿ ಅನೇಕ ರೀತಿಯ ಸಮಸ್ಯೆಗಳಿವೆ. ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಈ ಶಿಕ್ಷಣ ನೀತಿಯ ದೃಷ್ಟಿಕೋನವನ್ನು ಅರ್ಥೈಸಿಕೊಳ್ಳಬೇಕಾಗುತ್ತದೆ. ಹಾಗಾಗಿ, ಈ ಕುರಿತು ಅರಿವು ಹೊಂದುವುದು ಮುಖ್ಯ' ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿಯ ಸಂಯೋಜಕ ವಿನಾಯಕ ಜೋಶಿ, ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಬಸವರಾಜ ಎಲ್. ಲಕ್ಕಣ್ಣವರ, ಎಂ.ಎಸ್.ಡಬ್ಲ್ಯು ವಿಭಾಗದ ಉಪನ್ಯಾಸಕ ಸೋಮಲಿಂಗ ಕರಣಿ, ಆರ್.ಡಿ.ಪಿ.ಆರ್. ವಿಭಾಗದ ಉಪನ್ಯಾಸಕ ಪ್ರಕಾಶ ಎಸ್. ಮಾಚೇನಹಳ್ಳಿ ಇದ್ದರು.

ವಿಚಾರ ಸಂಕಿರಣದಲ್ಲಿ ಗದಗ ನಗರದ ವಿವಿಧ ಶಾಲೆ ಹಾಗೂ ಕಾಲೇಜಿನ ಶಿಕ್ಷಕರು ಹಾಗೂ ಗದಗಿನ ಭಾರತೀಯ ಶಿಕ್ಷಣ ಮಂಡಳಿಯ ಸದಸ್ಯರು ಭಾಗಿಯಾಗಿದ್ದರು.

ಮುಖ್ಯಾಂಶಗಳು

- ರಾಷ್ಟ್ರ ಕಟ್ಟುವಲ್ಲಿ ಶಿಕ್ಷಣ ಪಾತ್ರ ಮಹತ್ತರವಾದುದು
- ಹೊಸ ಶಿಕ್ಷಣ ನೀತಿಯ ದೃಷ್ಟಿಕೋನ ಅರ್ಥೈಸಿಕೊಳ್ಳಿ